**All India Radio: Bangalore**
**National Bulletin In Kannada**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**

26.02.2026 19.35 p.m

***********************

ಮುಖ್ಯಾಂಶಗಳು

- ಇಸ್ರೇಲ್ ಪ್ರಧಾನಿಯೊಂದಿಗೆ ಪ್ರಧಾನಿ ನರೇಂದ್ರ ಮೋದಿ ನಿಯೋಗ ಮಟ್ಟದ ಮಾತುಕತೆ: ಹಲವು ಒಪ್ಪಂದಗಳಿಗೆ ಸಹಿ
- ಭಾರತೀಯ ರೈಲ್ವೆಯ ಸುಧಾರಣೆಗಾಗಿ ರೈಲ್ವೆ ಟೆಕ್ ನೀತಿ, ಇ-ರೈಲ್ವೆ ಪರಿಹಾರ ನ್ಯಾಯಾಧೀಕರಣ ಘೋಷಣೆ
- ಎನ್‌ಸಿಇಆರ್‌ಟಿ ೮ನೇ ತರಗತಿಯ ಪಠ್ಯಪುಸ್ತಕದ ಮೇಲೆ ಸಂಪೂರ್ಣ ನಿಷೇಧ ಹೇರಿದ ಸುಪ್ರೀಂ ಕೋರ್ಟ್
- ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್: ಭಾರತದ ವಿರುದ್ಧ ಟಾಸ್ ಗೆದ್ದ ಜಿಂಬಾಬ್ವೆ ಫೀಲ್ಡಿಂಗ್ ಆಯ್ಕೆ

*************

ಸಾಂಸ್ಕೃತಿಕ ವಿನಿಮಯ, ಮೀನುಗಾರಿಕೆ ಮತ್ತು ಜಲಚರ ಸಾಕಣೆ, ಯುಪಿಐ ಮತ್ತು ಕೃತಕ ಬುದ್ಧಿಮತ್ತೆಯ ಬಳಕೆಯ ಮೂಲಕ ಶಿಕ್ಷಣ ಸೇರಿದಂತೆ ಹಲವಾರು ಕ್ಷೇತ್ರಗಳಲ್ಲಿ ಭಾರತ ಮತ್ತು ಇಸ್ರೇಲ್ ಅನೇಕ ತಿಳುವಳಿಕೆ ಒಪ್ಪಂದಗಳನ್ನು ವಿನಿಮಯ ಮಾಡಿಕೊಂಡಿವೆ.

ಪ್ರಧಾನಿ ನರೇಂದ್ರ ಮೋದಿ ಮತ್ತು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ನಡುವಿನ ನಿಯೋಗ ಮಟ್ಟದ ಮಾತುಕತೆಯ ನಂತರ ಈ ಒಪ್ಪಂದಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು.

ನಂತರ ನಡೆದ ಜಂಟಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತ-ಇಸ್ರೇಲ್ ಸಂಬಂಧವು ಆಳವಾದ ನಂಬಿಕೆ, ಹಂಚಿಕೆಯ ಪ್ರಜಾಪ್ರಭುತ್ವ ಮೌಲ್ಯಗಳು ಮತ್ತು ಆಳವಾದ ಮಾನವ ಸಂವೇದನೆಗಳ ಬಲವಾದ ತಳಹದಿಯ ಮೇಲೆ ಸ್ಥಾಪಿತವಾಗಿದೆ ಎಂದು ಹೇಳಿದರು.

ಸಮಯ-ಪರೀಕ್ಷಿತ ಪಾಲುದಾರಿಕೆಯನ್ನು ವಿಶೇಷ ಕಾರ್ಯತಂತ್ರದ ಪಾಲುದಾರಿಕೆಯ ಸ್ಥಾನಮಾನಕ್ಕೆ ಏರಿಸುವ ಐತಿಹಾಸಿಕ ನಿರ್ಧಾರವನ್ನು ಇಂದು ಎರಡೂ ಕಡೆಯವರು ತೆಗೆದುಕೊಂಡಿದ್ದಾರೆ ಎಂದರು.

ಇಂದು, ಎರಡೂ ಕಡೆಯವರು ನಿರ್ಣಾಯಕ ಮತ್ತು ಉದಯೋನ್ಮುಖ ತಂತ್ರಜ್ಞಾನಗಳ ಪಾಲುದಾರಿಕೆಯನ್ನು ಸ್ಥಾಪಿಸಲು ನಿರ್ಧರಿಸಿದ್ದಾರೆ. ಇದು ಕೃತಕ ಬುದ್ಧಿಮತ್ತೆ, ಕ್ವಾಂಟಮ್ ಮತ್ತು ಅಪರೂಪದ ಖನಿಜಗಳನಂತಹ ಕ್ಷೇತ್ರಗಳಲ್ಲಿ ಸಹಕಾರಕ್ಕೆ ಹೊಸ ಆವೇಗವನ್ನು ನೀಡುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

*********************

ಈ ವರ್ಷ ೫೨ ವಾರಗಳಲ್ಲಿ ೫೨ ಸುಧಾರಣೆಗಳನ್ನು ಕೈಗೊಳ್ಳುವ ಭಾರತೀಯ ರೈಲ್ವೆಯ ಸಂಕಲ್ಪದ ಭಾಗವಾಗಿ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಇಂದು ಇನ್ನೂ ಎರಡು ಸುಧಾರಣೆಗಳನ್ನು ಘೋಷಿಸಿದರು.

ದೆಹಲಿಯಲ್ಲಿಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಚಿವರು, ಮೂರನೇ ಸುಧಾರಣೆಯಾದ ರೈಲ್ವೆ ಟೆಕ್ ನೀತಿಯನ್ನು ಅನಾವರಣಗೊಳಿಸಿದರು. ರೈಲ್ವೆಯಲ್ಲಿ ತಂತ್ರಜ್ಞಾನದ ದೊಡ್ಡ ಪ್ರಮಾಣದ ಅಳವಡಿಕೆಯನ್ನು ಉತ್ತೇಜಿಸುವುದು ಇದರ ಉದ್ದೇಶವಾಗಿದೆ ಎಂದು ಹೇಳಿದರು.

ರೈಲ್ವೆಯಲ್ಲಿ ನಾವೀನ್ಯತೆಯನ್ನು ಉತ್ತೇಜಿಸಲು ನಾವೀನ್ಯಕಾರರು, ನವೋದ್ಯಮಗಳು, ಉದ್ಯಮ ಮತ್ತು ಸಂಸ್ಥೆಗಳನ್ನು ತೊಡಗಿಸಿಕೊಳ್ಳುವುದು ಭಾರತೀಯ ರೈಲ್ವೆಯ ಉದ್ದೇಶವಾಗಿದೆ. ಪ್ರಯಾಣಿಕರ ಸುರಕ್ಷತೆಯನ್ನು ಹೆಚ್ಚಿಸಲು ಕೃತಕ ಬುದ್ಧಿಮತ್ತೆಯನ್ನು ಹೇಗೆ ಬಳಸಬಹುದು ಎಂಬುದನ್ನು ಗಮನದಲ್ಲಿಟ್ಟುಕೊಂಡು ಈ ನೀತಿಯನ್ನು ಜಾರಿಗೆ ತರಲಾಗಿದೆ ಎಂದು ಅವರು ತಿಳಿಸಿದರು. ಇದೇ ವೇಳೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ನಾವೀನ್ಯತೆಗಾಗಿ ರೈಲ್ ಟೆಕ್ ಪೋರ್ಟಲ್ ಅನ್ನು ಸಹ ಅನಾವರಣಗೊಳಿಸಿದರು.

**********************

೪ನೇ ಸುಧಾರಣೆ ಕುರಿತು ಮಾತನಾಡಿದ ಸಚಿವರು, ಇ-ರೈಲ್ವೆ ಪರಿಹಾರ ನ್ಯಾಯಾಧೀಕರಣವನ್ನು ಘೋಷಿಸಿದರು. ಇದು ನಾಗರಿಕ ಕೇಂದ್ರಿತ ಸುಧಾರಣೆ ಮತ್ತು ರೈಲ್ವೆ ಪರಿಹಾರ ನ್ಯಾಯಾಧೀಕರಣದಲ್ಲಿ ಪ್ರಕರಣಗಳ ಪ್ರಕ್ರಿಯೆಯನ್ನು ಸುಗಮಗೊಳಿಸಲು ಮತ್ತು ಆಧುನೀಕರಿಸಲು ವಿನ್ಯಾಸಗೊಳಿಸಲಾದ ಡಿಜಿಟಲ್ ಪರಿಹಾರವಾಗಿದೆ. ಇದು ೨೩ ರೈಲ್ವೆ ಪರಿಹಾರ ನ್ಯಾಯಾಧೀಕರಣಗಳಲ್ಲಿ ದಕ್ಷತೆ, ಹೊಣೆಗಾರಿಕೆ ಮತ್ತು ಪಾರದರ್ಶಕತೆಯನ್ನು ಸುಧಾರಿಸುತ್ತದೆ ಎಂದು ಅವರು ಮಾಹಿತಿ ನೀಡಿದರು.

**********************

೨೦೨೬-೨೭ ರ ಹಣಕಾಸು ವರ್ಷದಲ್ಲಿ ಭಾರತದ ಆರ್ಥಿಕತೆಯು ಶೇಕಡಾ ೬.೮ ರಿಂದ ೭.೨ ರವರೆಗೆ ವಿಸ್ತರಿಸುವ ನಿರೀಕ್ಷೆಯಿದೆ ಎಂದು ಎಕಾನಮಿ ವಾಚ್ ವರದಿ ತಿಳಿಸಿದೆ.

ಅಮೆರಿಕದ ಸುಂಕದ ಪ್ರಕ್ಷುಬ್ಧತೆಯಿಂದ ಉಂಟಾದ ಜಾಗತಿಕ ಅನಿಶ್ಚಿತತೆಗಳನ್ನು ಎದುರಿಸಲು ಭಾರತ ಸರ್ಕಾರದ ಆರ್ಥಿಕ ಸುಧಾರಣೆಗಳ ಜೊತೆಗೆ, ಪ್ರಮುಖ ರಾಷ್ಟ್ರಗಳೊಂದಿಗೆ ದ್ವಿಪಕ್ಷೀಯ ವ್ಯಾಪಾರ ಒಪ್ಪಂದಗಳನ್ನು ನಿರೀಕ್ಷಿಸಲಾಗಿರುವುದರಿಂದ ಈ ಬೆಳವಣಿಗೆ ಅಂದಾಜಿಸಲಾಗಿದೆ.

ವಿಶ್ವದ ಪ್ರಮುಖ ಆರ್ಥಿಕತೆಗಳು ಅಥವಾ ಆರ್ಥಿಕ ಗುಂಪುಗಳೊಂದಿಗೆ ಭಾರತದ ವ್ಯಾಪಕ ದ್ವಿಪಕ್ಷೀಯ ವ್ಯಾಪಾರ ಒಪ್ಪಂದಗಳ ಹಿನ್ನೆಲೆಯಲ್ಲಿ, ಭಾರತದ ಮಧ್ಯಮ-ಅವಧಿಯ ನಿರೀಕ್ಷೆಗಳು ಉಜ್ವಲವಾಗಿವೆ ಎಂದು ಇವೈ ಇಂಡಿಯಾದ ಮುಖ್ಯ ನೀತಿ ಸಲಹೆಗಾರ ಡಿ.ಕೆ.ಶ್ರೀವಾಸ್ತವ ತಿಳಿಸಿದ್ದಾರೆ.

**********************

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದಿನಿಂದ ಬಿಹಾರಕ್ಕೆ ಮೂರು ದಿನಗಳ ಪ್ರವಾಸ ಕೈಗೊಂಡಿದ್ದಾರೆ. ಅರಾರಿಯಾದಲ್ಲಿ ನಡೆದ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ, ಪ್ರತಿಯೊಬ್ಬ ನುಸುಳುಕೋರರನ್ನು ಭಾರತದ ನೆಲದಿಂದ ಹೊರಹಾಕಲು ಬದ್ಧವಾಗಿದೆ ಎಂದು ಹೇಳಿದರು. ನುಸುಳುಕೋರರಿಂದ ಸ್ವಾತಂತ್ರ್ಯವು ಕೇವಲ ಮತದಾರರ ಪಟ್ಟಿಯಿಂದ ಹೆಸರುಗಳನ್ನು ಅಳಿಸುವುದಕ್ಕೆ ಸೀಮಿತವಾಗಿಲ್ಲ. ಬದಲಾಗಿ ದೇಶದಿಂದ ಅಕ್ರಮ ನುಸುಳುಕೋರರನ್ನು ಹೊರಹಾಕಲು ಸಮಗ್ರ ಕ್ರಮ ಒಳಗೊಂಡಿರುತ್ತದೆ. ಗಡಿ ಪ್ರದೇಶದಾದ್ಯಂತ ಶೀಘ್ರದಲ್ಲೇ ಕೇಂದ್ರೀಕೃತ ಉಪಕ್ರಮ ಪ್ರಾರಂಭವಾಗಲಿದೆ ಎಂದು ತಿಳಿಸಿದರು.

**********************

ರೇಡಿಯೋ ವಿಶ್ವಾಸಾರ್ಹ ಮತ್ತು ಪರಿಣಾಮಕಾರಿ ಸಂವಹನ ಮಾಧ್ಯಮವಾಗಿದ್ದು, ಕರ್ನಾಟಕದ ಭದ್ರಾವತಿ ಆಕಾಶವಾಣಿಗೆ ನೂತನವಾಗಿ ಎಫ್.ಎಂ ಅಳವಡಿಸುವ ಮೂಲಕ ಕಡೆಯ ವ್ಯಕ್ತಿಯನ್ನು ತಲುಪುವ ದೃಢ ಹೆಜ್ಜೆಯನ್ನು ಇಡಲಾಗಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಎಲ್.ಮುರುಗನ್ ಹೇಳಿದ್ದಾರೆ. ಶಿವಮೊಗ್ಗದ ವಿದ್ಯಾನಗರದಲ್ಲಿಂದು ಭದ್ರಾವತಿ ಆಕಾಶವಾಣಿಗೆ ನೂತನವಾಗಿ ಅಳವಡಿಸಲಾದ ೧೦ ಕಿಲೋ ವ್ಯಾಟ್ ಸಾಮರ್ಥ್ಯದ ಎಫ್.ಎಂ.ಪ್ರೇಷಕದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು. ಭದ್ರಾವತಿ ಆಕಾಶವಾಣಿಗೆ ಇದೊಂದು ಉಡುಗೊರೆಯಾಗಿದ್ದು, ಇದು ಸುತ್ತಲಿನ ೮ ಜಿಲ್ಲೆಗಳನ್ನು ತಲುಪಲಿದೆ. ಕೇಂದ್ರ ಸರ್ಕಾರವು ಡಿಜಿಟಲ್ ಮತ್ತು ಸಂವಹನ ಮಾಧ್ಯಮಗಳ ಮೂಲಸೌಕರ್ಯಗಳ ಅಭಿವೃದ್ಧಿ ಮತ್ತು ಗುಣಮಟ್ಟ ವೃದ್ಧಿಗಾಗಿ ಎರಡು ಸಾವಿರ ಕೋಟಿ ರೂಪಾಯಿಗಳನ್ನು ಖರ್ಚು ಮಾಡುತ್ತಿದೆ ಎಂದು ಸಚಿವ ಎಲ್.ಮುರುಗನ್ ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಸದ ಬಿ.ವೈ.ರಾಘವೇಂದ್ರ ಉಪಸ್ಥಿತರಿದ್ದರು.

**********************

ನ್ಯಾಯಾಂಗದಲ್ಲಿನ ಭ್ರಷ್ಟಾಚಾರದ ಬಗ್ಗೆ ಅಧ್ಯಾಯ ಹೊಂದಿರುವ ಎನ್‌ಸಿಇಆರ್‌ಟಿ ೮ನೇ ತರಗತಿಯ ಪಠ್ಯಪುಸ್ತಕದ ಮೇಲೆ ಸುಪ್ರೀಂ ಕೋರ್ಟ್ ಸಂಪೂರ್ಣ ನಿಷೇಧ ಹೇರಿದೆ. ಎಲ್ಲಾ ಭೌತಿಕ ಪ್ರತಿಗಳನ್ನು ವಶಪಡಿಸಿಕೊಳ್ಳಲು ಮತ್ತು ಅದರ ಡಿಜಿಟಲ್ ರೂಪಗಳನ್ನು ತೆಗೆದುಹಾಕಲು ಸುಪ್ರೀಂ ಕೋರ್ಟ್ ಆದೇಶಿಸಿದೆ. ಕೇಂದ್ರ ಮತ್ತು ರಾಜ್ಯ ಅಧಿಕಾರಿಗಳಿಗೆ ತನ್ನ ನಿರ್ದೇಶನಗಳನ್ನು ತಕ್ಷಣವೇ ಪಾಲಿಸುವಂತೆ ಸುಪ್ರೀಂ ಕೋರ್ಟ್ ಆದೇಶಿಸಿದೆ ಮತ್ತು ಯಾವುದೇ ರೂಪದಲ್ಲಿ ನಿರ್ದೇಶನಗಳನ್ನು ಉಲ್ಲಂಘಿಸಿದರೆ, ಗಂಭೀರ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದೆ.

ಇದೇ ವೇಳೆ ಎನ್‌ಸಿಇಆರ್‌ಟಿ ನಿರ್ದೇಶಕರು, ಶಾಲಾ ಶಿಕ್ಷಣ ಕಾರ್ಯದರ್ಶಿಗೆ ನ್ಯಾಯಾಲಯ ಶೋಕಾಸ್ ನೋಟಿಸ್‌ಗಳನ್ನು ನೀಡಿದೆ. ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ನೇತೃತ್ವದ ನ್ಯಾಯಪೀಠ, ಸಂಸ್ಥೆಯನ್ನು ದುರ್ಬಲಗೊಳಿಸಲು ಮತ್ತು ನ್ಯಾಯಾಂಗದ ಘನತೆಯನ್ನು ಅವಮಾನಿಸಲು ಉದ್ದೇಶಪೂರ್ವವಾಗಿ ಕ್ರಮ ಕೈಗೊಳ್ಳಲಾಗಿದೆ. ಇಂತಹ ದುಷ್ಕೃತ್ಯವು ನ್ಯಾಯಾಂಗದ ಮೇಲೆ ಶಾಶ್ವತ ಪರಿಣಾಮ ಬೀರಲಿದೆ ಎಂದು ಹೇಳಿದೆ. ಮುಂದಿನ ವಿಚಾರಣೆಯನ್ನು ಮಾರ್ಚ್ ೧೧ ರಂದು ಮುಂಡೂಡಲಾಗಿದೆ.

*********************

ಪ್ರಧಾನಿ ನರೇಂದ್ರ ಮೋದಿ ಅವರು ಇನ್‌ಸ್ಟಾಗ್ರಾಮ್‌ನಲ್ಲಿ ೧೦೦ ದಶಲಕ್ಷ ಫಾಲೋವರ್‌ಗಳ ಐತಿಹಾಸಿಕ ಮೈಲಿಗಲ್ಲನ್ನು ದಾಟಿದ್ದಾರೆ. ಅವರು ಇನ್‌ಸ್ಟಾಗ್ರಾಮ್‌ನಲ್ಲಿ ಈ ಸಾಧನೆ ಮಾಡಿದ ಮೊದಲ ವಿಶ್ವ ನಾಯಕ ಮತ್ತು ರಾಜಕಾರಣಿಯಾಗಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ೨೦೧೪ರಲ್ಲಿ ಇನ್‌ಸ್ಟಾಗ್ರಾಮ್‌ಗೆ ಸೇರಿದರು. ಅವರು ಇನ್‌ಸ್ಟಾಗ್ರಾಮ್‌ನಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗಿಂತ ಎರಡು ಪಟ್ಟು ಹೆಚ್ಚು ಫಾಲೋವರ್‌ಗಳನ್ನು ಹೊಂದಿದ್ದಾರೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ೪೩.೨ ದಶಲಕ್ಷ ಫಾಲೋವರ್‌ಗಳೊಂದಿಗೆ ಎರಡನೇ ಸ್ಥಾನದಲ್ಲಿದ್ದಾರೆ. ಭಾರತದ ನಾಯಕರನ್ನು ಮಾತ್ರ ಪರಿಗಣಿಸಿದರೆ, ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಸುಮಾರು ೧೬.೧ ದಶಲಕ್ಷ ಫಾಲೋವರ್‌ಗಳೊಂದಿಗೆ ಎರಡನೇ ಸ್ಥಾನದಲ್ಲಿದ್ದಾರೆ.

**********************

ವಿಮಾನ ಪ್ರಯಾಣಿಕರಿಗಾಗಿ ನಾಗರಿಕ ವಿಮಾನಯಾನ ಮಹಾ ನಿರ್ದೇಶನಾಲಯ-ಡಿಜಿಸಿಎ, ಪ್ರಯಾಣಿಕ ಸ್ನೇಹಿ ಹೊಸ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದ್ದು, ಹಣ ಮರುಪಾವತಿ ಪ್ರಕ್ರಿಯೆಯನ್ನು

ಇನ್ನಷ್ಟು ಸರಳಗೊಳಿಸಿದೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ಟಿಕೆಟ್ ಬುಕ್ ಮಾಡಿದ ೪೮ ಗಂಟೆಗಳ ಒಳಗೆ ಪ್ರಯಾಣಿಕರು ಕೆಲವು ನಿಬಂಧನೆಗಳಿಗೆ ಒಳಪಟ್ಟು ಯಾವುದೇ ಹೆಚ್ಚುವರಿ ಶುಲ್ಕವಿಲ್ಲದೆ ಟಿಕೆಟ್ ರದ್ದುಗೊಳಿಸಬಹುದು ಅಥವಾ ಬದಲಾಯಿಸಬಹುದು. ಹೆಸರಿನಲ್ಲಿ ಏನಾದರೂ ತಪ್ಪಾಗಿದ್ದರೆ, ಅದನ್ನು ೨೪ ಗಂಟೆಗಳ ಒಳಗೆ ಯಾವುದೇ ಶುಲ್ಕವಿಲ್ಲದೆ ತಿದ್ದುಪಡಿ ಮಾಡಿಕೊಳ್ಳಬಹುದು.

**********************

ಚೆನ್ನೈನ ಎಂ.ಎ. ಚಿದಂಬರಂ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಸೂಪರ್ ೮ರ ಹಂತದ ಗುಂಪು ಒಂದರ ಪಂದ್ಯದಲ್ಲಿ ಭಾರತ ಮತ್ತು ಜಿಂಬಾಬ್ವೆ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಜಿಂಬಾಬ್ವೆ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಮೊದಲು ಬ್ಯಾಟಿಂಗ್ ಮಾಡುತ್ತಿರುವ ಭಾರತ, ಇತ್ತೀಚಿನ ವರದಿ ಬಂದಾಗ, ೬ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೮೦ ರನ್ ಮಾಡಿ ಆಡುತ್ತಿದೆ. ಅಹಮದಾಬಾದ್‌ನ ನರೇಂದ್ರ ಮೋದಿ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆದ ಮತ್ತೊಂದು ಪಂದ್ಯದಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ದಕ್ಷಿಣ ಆಫ್ರಿಕಾ ೯ ವಿಕೆಟ್‌ಗಳಿಂದ ಭರ್ಜರಿ ಗೆಲವು ಸಾಧಿಸಿದೆ.

ಮೊದಲು ಬ್ಯಾಟಿಂಗ್ ಮಾಡಿದ ವೆಸ್ಟ್ ಇಂಡೀಸ್ ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೭೬ ರನ್ ಗಳಿಸಿತು. ಗೆಲುವಿನ ಗುರಿ ಬೆನ್ನತ್ತಿದ ದಕ್ಷಿಣ ಆಫ್ರಿಕಾ, ೧೬.೧ ಓವರ್‌ಗಳಲ್ಲಿ ಒಂದು ವಿಕೆಟ್ ನಷ್ಟಕ್ಕೆ ೧೭೭ ರನ್ ಗಳಿಸುವ ಮೂಲಕ ಗೆಲುವಿನ ನಗೆ ಬೀರಿತು.

**********************

ಹುಬ್ಬಳ್ಳಿಯ ಕೆಎಸ್‌ಸಿಎ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಕರ್ನಾಟಕ ಹಾಗೂ ಜಮ್ಮು-ಕಾಶ್ಮೀರ ನಡುವಿನ ರಣಜಿ ಟ್ರೋಫಿಯ ಫೈನಲ್ ಪಂದ್ಯದ ಮೂರನೇ ದಿನದ ಅಂತ್ಯಕ್ಕೆ ಮೊದಲನೇ ಇನ್ನಿಂಗ್ಸ್‌ನಲ್ಲಿ ಕರ್ನಾಟಕ ೫ ವಿಕೆಟ್ ನಷ್ಟಕ್ಕೆ ೨೨೦ ರನ್ ಗಳಿಸಿದೆ. ನಾಳೆ ೪ನೇ ದಿನದಾಟ ಮುಂದುವರೆಯಲಿದೆ. ಮೊದಲ ಇನ್ನಿಂಗ್ಸ್‌ನಲ್ಲಿ ಜಮ್ಮು-ಕಾಶ್ಮೀರ ತಂಡ, ೫೮೪ ರನ್ ಗಳಿಸಿದೆ.

**********************

ದೇಶಾದ್ಯಂತ ಮಹಿಳೆಯರಿಗೆ ಹೆಚ್ಚಿನ ಅವಕಾಶಗಳು, ಆರ್ಥಿಕ ಸ್ವಾತಂತ್ರ್ಯ ಮತ್ತು ಸುಧಾರಿತ ಜೀವನ ಗುಣಮಟ್ಟವನ್ನು ಖಚಿತಪಡಿಸಿಕೊಳ್ಳಲು ಮಹಿಳೆಯರ ನೇತೃತ್ವದ ಅಭಿವೃದ್ಧಿಯು ಸರ್ಕಾರದ ನೀತಿಯಾಗಿದೆ ಎಂದು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣ ದೇವಿ ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ ಮಹಿಳಾ ನೇತೃತ್ವದ ಸಮ್ಮೇಳನ 'ಸಶಕ್ತ ನಾರಿ-ವಿಕಸಿತ ಭಾರತ್' ಉದ್ಘಾಟನಾ ಅಧಿವೇಶನವನ್ನುದ್ದೇಶಿಸಿ ಮಾತನಾಡಿದ ಅವರು, ಪ್ರಧಾನ ಮಂತ್ರಿ ಮುದ್ರಾ ಯೋಜನೆ, ಸ್ಟಾರ್ಟ್‌ಅಪ್ ಇಂಡಿಯಾ ಮತ್ತು ಪಿಎಂ ಸ್ವನಿಧಿ ಯಂತಹ ಸರಕಾರದ ಹಲವಾರು ಉಪಕ್ರಮಗಳನ್ನು ಉಲ್ಲೇಖಿಸಿದ ಅವರು, ಈ ಉಪಕ್ರಮಗಳು ಮಹಿಳೆಯರನ್ನು ಆರ್ಥಿಕವಾಗಿ ಬಲಪಡಿಸಿವೆ ಹಾಗೂ ಅವರ ಆತ್ಮವಿಶ್ವಾಸ ಮತ್ತು ಸ್ವಾವಲಂಬನೆಯನ್ನು ಹೆಚ್ಚಿಸಿವೆ ಎಂದರು.

ಮಹಿಳಾ ಕೇಂದ್ರಿತ ಯೋಜನೆಗಳಿಗಾಗಿ ಈ ವರ್ಷ ಸುಮಾರು ಐದು ಲಕ್ಷ ಕೋಟಿ ರೂಪಾಯಿಗಳನ್ನು ಈ ಸಾಲಿನ ಬಜೆಟ್‌ನಲ್ಲಿ ಮೀಸಲಿಡಲಾಗಿದೆ. ಪ್ರಸ್ತಾವಿತ Sಊಇ-ಒಚಿಡಿಣ ಉಪಕ್ರಮವು ಮಹಿಳೆಯರಿಗೆ

ಮೀಸಲಾದ ಮಾರುಕಟ್ಟೆ ವೇದಿಕೆಯನ್ನು ಒದಗಿಸುತ್ತದೆ ಎಂದು ಅವರು ತಿಳಿಸಿದರು. ದೇಶಾದ್ಯಂತ ಸುಮಾರು ೧೦ ಕೋಟಿ ಮಹಿಳೆಯರು ಸ್ವ-ಸಹಾಯ ಗುಂಪುಗಳೊಂದಿಗೆ ಸಂಪರ್ಕ ಹೊಂದಿದ್ದಾರೆ ಮತ್ತು ಎರಡು ಕೋಟಿಗೂ ಹೆಚ್ಚು ಜನರು ಲಕ್ಷಪತಿ ದೀದಿಗಳಾಗಿದ್ದಾರೆ. ಈ ಸಂಖ್ಯೆಯನ್ನು ಆರು ಕೋಟಿಗೆ ಹೆಚ್ಚಿಸುವ ಗುರಿ ಇದೆ ಎಂದು ಸಚಿವೆ ಅನ್ನಪೂರ್ಣ ದೇವಿ ಹೇಳಿದರು.

**********************

ಕೆನಡಾ ಪ್ರಧಾನಿ ಮಾರ್ಕ್ ಕಾರ್ನೆ ಅವರು ನಾಳೆಯಿಂದ ಮಾರ್ಚ್ ೨ರವರೆಗೆ ಭಾರತಕ್ಕೆ ಅಧಿಕೃತ ಭೇಟಿ ನೀಡಲಿದ್ದಾರೆ. ಇದು ಪ್ರಧಾನಿ ಕಾರ್ನೆ ಅವರ ಮೊದಲ ಭಾರತ ಭೇಟಿಯಾಗಿದೆ. ಮಾರ್ಕ್ ಕಾರ್ನೆಯವರು ನಾಳೆ ಮುಂಬೈಗೆ ಆಗಮಿಸಲಿದ್ದಾರೆ. ಮುಂದಿನ ಎರಡು ದಿನಗಳಲ್ಲಿ ಅವರು ಭಾರತ ಮತ್ತು ಕೆನಡಾದ ಸಿಇಒಗಳು, ಉದ್ಯಮ ಮತ್ತು ಹಣಕಾಸು ತಜ್ಞರು, ನಾವೀನ್ಯಕಾರರು, ಶಿಕ್ಷಣ ತಜ್ಞರು ಮತ್ತು ಭಾರತದಲ್ಲಿರುವ ಕೆನಡಾದ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಲಿದ್ದಾರೆ.

ಮಾರ್ಚ್ ೧ ರಂದು ನವದೆಹಲಿಗೆ ಅವರು ಆಗಮಿಸಲಿದ್ದಾರೆ. ಮರುದಿನ, ಹೈದರಾಬಾದ್ ಹೌಸ್‌ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಲಿದ್ದಾರೆ. ಉಭಯ ನಾಯಕರು ಭಾರತ-ಕೆನಡಾ ವ್ಯೂಹಾತ್ಮಕ ಪಾಲುದಾರಿಕೆಯ ವಿವಿಧ ಕ್ಷೇತ್ರಗಳಲ್ಲಿ ಈವರೆಗೆ ಸಾಧಿಸಲಾದ ಪ್ರಗತಿಯನ್ನು ಪರಿಶೀಲಿಸಲಿದ್ದಾರೆ.

ವ್ಯಾಪಾರ ಮತ್ತು ಹೂಡಿಕೆ, ಇಂಧನ, ನಿರ್ಣಾಯಕ ಖನಿಜಗಳು, ಕೃಷಿ, ಶಿಕ್ಷಣ, ಸಂಶೋಧನೆ, ನಾವೀನ್ಯತೆ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿನ ಸಹಕಾರದ ಕುರಿತು ಚರ್ಚಿಸಲಿದ್ದಾರೆ. ಅಲ್ಲದೆ, ಪ್ರಾದೇಶಿಕ ಮತ್ತು ಜಾಗತಿಕ ವಿದ್ಯಮಾನಗಳ ಬಗ್ಗೆಯೂ ಉಭಯ ನಾಯಕರು ವಿಚಾರ ವಿನಿಮಯ ಮಾಡಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

**********************

ಮುಂಬೈ ಷೇರು ಮಾರುಕಟ್ಟೆಯಲ್ಲಿಂದ ಷೇರು ಸಂವೇದಿ ಸೂಚ್ಯಂಕ - ಸೆನ್ಸೆಕ್ಸ್ ೨೭ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೨ ಸಾವಿರದ ೨೪೯ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ - ನಿಫ್ಟಿ ೧೪ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೨೫ ಸಾವಿರದ ೪೯೭ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೯೦ ರೂಪಾಯಿ ೯೧ ಪೈಸೆಯಷ್ಟಾಗಿದೆ.

*********ಮುಕ್ತಾಯ*******